ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

17

ಇಲಾಖೆ / ವಿಷಯ : DEPARTMENT / SUBJECT: ಶಿಕ್ಷಣ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE 29/8/2020

ಮಾರ್ಕೆಟ್ ಸೆನ್ಸೆಕ್ಸ್ 39,467

# ಅಂತಿಮ ವರ್ಷದ ಪರೀಕ್ಷೆ ಕಡ್ಡಾಯ


## ಪರೀಕ್ಷೆ ನಡೆಸದೆ ಪಾಸು ಮಾಡುವಂತಿಲ್ಲ: ಸುಪ್ರೀಂ | ಸೆ.30ರೊಳಗೆ ಪರೀಕ್ಷೆಗೆ ಕಟ್ಟಪ್ಪಣೆ

## ಪರೀಕ್ಷೆ ನಡೆಸಲು ಸಾಧ್ಯವಾಗದೇ ಇದ್ದರೆ ಮುಂದೂಡಿ, ಹೊಸ ದಿನಾಂಕ ಪಡೆದುಕೊಳ್ಳಿ

• **ಪಿಟಿಐ** ನವದೆಹಲಿ

ಅಂತಿಮ ವರ್ಷದ ಪರೀಕ್ಷೆಗಳನ್ನು ನಡೆಸದೆ ವಿದ್ಯಾರ್ಥಿಗಳನ್ನು ಉತ್ತೀರ್ಣಗೊಳಿಸುವಂತಿಲ್ಲ ಎಂದು ಸ್ಪಷ್ಟವಾಗಿ ಹೇಳಿರುವ ಸುಪ್ರೀಂಕೋರ್ಟ್, ಯುಜಿಸಿ ನಿಯಮದಂತೆ ಸೆ.30ರೊಳಗೆ ಈ ಪರೀಕ್ಷೆಗಳನ್ನು ನಡೆಸಬೇಕು ಎಂದು ಎಲ್ಲಾ ರಾಜ್ಯಗಳು ಹಾಗೂ ವಿಶ್ವವಿದ್ಯಾಲಯಗಳಿಗೆ ತಾಕೀತು ಮಾಡಿದೆ.

ಸೆ.30ರೊಳಗೆ ವಿಶ್ವವಿದ್ಯಾಲಯಗಳು ಹಾಗೂ ಪದವಿ ಕಾಲೇಜುಗಳು ಅಂತಿಮ ವರ್ಷದ ಕೋರ್ಸ್‌ಗಳಿಗೆ ಪರೀಕ್ಷೆಗಳನ್ನು ನಡೆಸಬೇಕು ಎಂದು ಈ ಹಿಂದೆ ವಿಶ್ವವಿದ್ಯಾಲಯಗಳ ಧನಸಹಾಯ ಆಯೋಗ (ಯುಜಿಸಿ) ಮಾರ್ಗದರ್ಶಿ ಸೂತ್ರಗಳನ್ನು ಪ್ರಕಟಿಸಿತ್ತು. ಆದರೆ, ಕೊರೋನಾ ವೈರಸ್ ಹರಡುತ್ತಿರುವ ಹಿನ್ನೆಲೆಯಲ್ಲಿ ಪರೀಕ್ಷೆ ನಡೆಸಲು ಸಾಧ್ಯವಿಲ್ಲ ಎಂದು ದೆಹಲಿ, ಮಹಾರಾಷ್ಟ್ರ ಮುಂತಾದ ಸರ್ಕಾರಗಳು ಪರೀಕ್ಷೆಗಳನ್ನೇ ರದ್ದುಪಡಿಸಿದ್ದವು. ಮಹಾರಾಷ್ಟ್ರದ ಆಡಳಿತಾರೂಢ ಪಕ್ಷವಾಗಿರುವ ಶಿವಸೇನೆಯ ಯುವ ಘಟಕವಾದ ಯುವ ಸೇನೆಯು ಸುಪ್ರೀಂ ಕೋರ್ಟ್‌ನಲ್ಲಿ ಯುಜಿಸಿಯ ಮಾರ್ಗದರ್ಶಿ ಸೂತ್ರಗಳನ್ನು ಪ್ರಶ್ನಿಸಿತ್ತು. ಅದರ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್, ಶುಕ್ರವಾರ ಮೇಲಿನ ಆದೇಶ ನೀಡಿದೆ. ಕೊರೋನಾ ವೈರಸ್‌ನಿಂದಾಗಿ ಸೆ.30ರೊಳಗೆ ಪರೀಕ್ಷೆ ನಡೆಸಲು ಸಾಧ್ಯವಿಲ್ಲ ಎನ್ನುವ



ರಾಜ್ಯ ಸರ್ಕಾರಗಳು ಯುಜಿಸಿಗೆ ಮನವಿ ಮಾಡಿ ಹೊಸ ದಿನಾಂಕ ಪಡೆದುಕೊಳ್ಳಬೇಕು. ವಿಪತ್ತು ನಿರ್ವಹಣಾ ಕಾಯ್ದೆಯಡಿ ಪರೀಕ್ಷೆಗಳನ್ನು ಮುಂದೂಡಲು ರಾಜ್ಯಗಳಿಗೆ ಅಧಿಕಾರವಿದೆ. ಆದರೆ, ಪರೀಕ್ಷೆ ನಡೆಸದೆ ಅಂತಿಮ ವರ್ಷದ ವಿದ್ಯಾರ್ಥಿಗಳನ್ನು ಪಾಸು ಮಾಡುವಂತಿಲ್ಲ ಎಂದು ನ್ಯಾ| ಆರ್.ಎಸ್. ರೆಡ್ಡಿ ಮತ್ತು ಎಂ.ಆರ್.ಶಾ ಅವರ ಪೀಠ ಹೇಳಿದೆ.

## ನೀಟ್: 6 ರಾಜ್ಯಗಳಿಂದ ಸುಪ್ರೀಂಗೆ ಮೇಲ್ಮನವಿ

ನವದೆಹಲಿ: ಕೊರೋನಾ ಸೋಂಕಿನ ನಡುವೆಯೇ ನೀಟ್ ಹಾಗೂ ಜೆಇಇ ಪರೀಕ್ಷೆ ನಡೆಸಲು ಅನುಮತಿ ನೀಡಿದ್ದ ಸುಪ್ರೀಂ ಕೋರ್ಟ್ ನ್ಯಾಯಾಲಯದ ಆದೇಶದ ವಿರುದ್ಧ ಬಿಜೆಪಿಯೇತರ 6 ರಾಜ್ಯ ಸರ್ಕಾರಗಳು ಶುಕ್ರವಾರ ಮೇಲ್ಮನವಿ ಸಲ್ಲಿಸಿವೆ. ವೈದ್ಯ ಕೋರ್ಸ್‌ಗಳ ಪ್ರವೇಶಕ್ಕೆ ನಡೆಸಲಾಗುವ ನೀಟ್ ಹಾಗೂ ಐಐಟಿಯಂತಹ ಉನ್ನತ ತಾಂತ್ರಿಕ ಕೋರ್ಸ್‌ಗಳ ದಾಖಲಾತಿಗಾಗಿ ಆಯೋಜಿಸಲಾಗುವ ಜೆಇಇ ಪರೀಕ್ಷೆಗಳನ್ನು ನಡೆಸಿದರೆ ವಿದ್ಯಾರ್ಥಿಗಳ ಜೀವಿಸುವ ಹಕ್ಕನ್ನು ರಕ್ಷಿಸಿದಂತೆ ಆಗುವುದಿಲ್ಲ ಎಂದು ಈ ಸಚಿವರು ವಾದಿಸಿದ್ದಾರೆ. ಈ ಪರೀಕ್ಷೆಗಳ ವಿಷಯದಲ್ಲಿ ಮಧ್ಯಪ್ರವೇಶ ಮಾಡುವುದಿಲ್ಲ. ಸಾಂಕ್ರಾಮಿಕ ರೋಗದ ಕಾರಣ ವಿದ್ಯಾರ್ಥಿಗಳು ತಮ್ಮ ಅಮೂಲ್ಯವಾದ ಒಂದು ವರ್ಷವನ್ನು ಕಳೆದುಕೊಳ್ಳಬಾರದು ಎಂದು ಸುಪ್ರೀಂಕೋರ್ಟ್ ತನ್ನ ಆ.17ರ ಆದೇಶದಲ್ಲಿ ಹೇಳಿತ್ತು. ಆದರೆ ನ್ಯಾಯಾಲಯದ ಆದೇಶವು ಪರೀಕ್ಷೆಗೆ ಹಾಜರಾಗಲಿರುವ ವಿದ್ಯಾರ್ಥಿಗಳ ಸುರಕ್ಷತೆ ಮತ್ತು ಭದ್ರತೆಯ ಖಾತರಿ ಒದಗಿಸಲು ವಿಫಲವಾಗಿದೆ. ಹೀಗಾಗಿ ಆ.17ರ ಆದೇಶವನ್ನು ಮರುಪರಿಶೀಲಿಸಬೇಕು ಎಂದು ಬಂಗಾಳ, ಜಾರ್ಖಂಡ್, ರಾಜಸ್ಥಾನ, ಛತ್ತೀಸ್‌ಗಢ, ಪಂಜಾಬ್, ಮಹಾರಾಷ್ಟ್ರ ಸಚಿವರ ಪರವಾಗಿ ಅರ್ಜಿ ಸಲ್ಲಿಸಲಾಗಿದೆ.